ಡಾ|| ಎನ್. ನಾಗಾಂಬಿಕಾ ದೇವಿ, ಭಾ.ಆ.ಸೇ.
ಸರ್ಕಾರದ ಪ್ರಧಾನ ಕಾರ್ಯದರ್ಶಿ
Dr. N. Nagambika Devi, I.A.S.
Principal Secretary to Govt.

ಕರ್ನಾಟಕ ಸರ್ಕಾರ ಸಚಿವಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
Karnataka Government Secretariat
Rural Development & Panchayat Raj Department

ಅ.ಸ.ಪ.ಸಂಖ್ಯೆ: ಗ್ರಾಅಪ 684 ಗ್ರಾಪಂಅ 2018 ದಿನಾಂಕ: 10.07.2018

ಮಾನ್ಯರೆ,

ಮಾನ್ಯ ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರ ಪತ್ರ ಸಂಖ್ಯೆ: ಪ್ರರೇ/95/2018-19, ದಿನಾಂಕ 03.07.2018ನ್ನು ಇದರೊಂದಿಗೆ ಲಗತ್ತಿಸಿದೆ. ಸದರಿ ಪತ್ರದಲ್ಲಿ ರಾಜ್ಯದಲ್ಲಿನ ಬಹುತೇಕ ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರ ಅನುಕೂಲಕ್ಕಾಗಿ ಮೂಲಭೂತ ಸೌಕರ್ಯಗಳಾದ ಯಾತ್ರಿ ನಿವಾಸ, ಡಾರ್ಮಿಟರಿ ಹಾಗೂ ಶೌಚಾಲಯಗಳನ್ನು ನಿರ್ಮಿಸುತ್ತಿದ್ದು, ಹಲವಾರು ತಾಣಗಳಲ್ಲಿ ಜಮೀನು/ನಿವೇಶನಗಳು ಜಿಲ್ಲಾ ಪಂಚಾಯತಿ/ತಾಲ್ಲೂಕು ಪಂಚಾಯತಿ/ಗ್ರಾಮ ಪಂಚಾಯತಿಗಳ ಮಾಲೀಕತ್ವಕ್ಕೆ ಒಳಪಟ್ಟಿರುತ್ತವೆ. ಈ ಜಮೀನು/ನಿವೇಶನಗಳ ಹಕ್ಕನ್ನು ಪ್ರವಾಸೋದ್ಯಮ ಇಲಾಖೆಗೆ ಹಸ್ತಾಂತರಿಸದಿರುವುದರಿಂದ ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸಲು ಕಷ್ಟಕರವಾಗಿರುತ್ತದೆ. ಇಂತಹ ಪ್ರಕರಣಗಳ ಬಗ್ಗೆ ಅಗತ್ಯ ಪರಿಶೀಲನೆ ನಡೆಸಿ, ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರ ಅನುಕೂಲಕ್ಕಾಗಿ ಯಾತ್ರಿ ನಿವಾಸ, ಡಾರ್ಮಿಟರಿ, ಶೌಚಾಲಯ, ಇನ್ನಿತರೆ ಮೂಲಭೂತ ಸೌಕರ್ಯಗಳನ್ನು ನಿರ್ಮಿಸಲು ಮಂಜೂರಾಗಿರುವ ಗ್ರಾಮ ಪಂಚಾಯತಿಗಳಲ್ಲಿನ ಆಸ್ತಿಗಳನ್ನು ಪ್ರವಾಸೋದ್ಯಮ ಇಲಾಖೆಗೆ ಹಸ್ತಾಂತರಿಸಲು ನಿಯಮಾನುಸಾರ ಅಗತ್ಯ ಕ್ರಮವಹಿಸುವಂತೆ ತಿಳಿಸಿದೆ. ಈ ಮೂಲಕ ರಾಜ್ಯದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ಬೇಕಾದಂತಹ ಪ್ರೋತ್ಸಾಹ ನೀಡಲು ತಿಳಿಸಲಾಗಿದೆ. ಈ ಕುರಿತು ಕೈಗೊಂಡ ಕ್ರಮದ ಬಗ್ಗೆ ಸರ್ಕಾರಕ್ಕೆ ವರದಿ ಸಲ್ಲಿಸಲು ತಿಳಿಸಿದೆ.

ಆದರಗಳೊಂದಿಗೆ.

ತಮ್ಮ ವಿಶ್ವಾಸಿ,

ಎಲ್ಲಾ ಜಿಲ್ಲಾ ಪಂಚಾಯತಿಗಳ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು

ಪ್ರತಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು.
2) ಮಾನ್ಯ ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರ ಆಪ್ತ ಕಾರ್ಯದರ್ಶಿಗಳು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ, ವಿಕಾಸಸೌಧ.
4) ಆಯುಕ್ತರು, ಪ್ರವಾಸೋದ್ಯಮ ಇಲಾಖೆ, ಖನಿಜ ಭವನ, ಬೆಂಗಳೂರು.
5) ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
6) ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

ಬಹುಮಹಡಿ ಕಟ್ಟಡ, 3ನೇ ಮಹಡಿ, 3ನೇ ಗೇಟ್, ಬೆಂಗಳೂರು-560 001. M.S. Building, 3rd Floor, Gate No. 3, Bangalore-560 001.
Tel. : 080-2235 3929 / 2203 2446 Fax : 080-2235 3927 e-mail : prsrdpr@karnataka.gov.in

ಸಾ.ರಾ. ಮಹೇಶ್
ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು

ಕೊಠಡಿ ಸಂಖ್ಯೆ 245 / 245ಎ
2ನೇ ಮಹಡಿ, ವಿಧಾನಸೌಧ
ಬೆಂಗಳೂರು - 560 001
ದೂರವಾಣಿ ಸಂ. : 080-22251639
ಆಂತರಿಕ : 080-22033009

ಸಂ.ಪ್ರರೇ./ 95 /2018-19

ದಿನಾಂಕ: 03/07/2018

ಮಾನ್ಯರೆ,

ವಿಷಯ: ಕರ್ನಾಟಕ ರಾಜ್ಯದಲ್ಲಿನ ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸುವ ಬಗ್ಗೆ

*****

ಕರ್ನಾಟಕ - ಒಂದು ರಾಜ್ಯ,ಹಲವು ಜಗತ್ತುಗಳು ಎಂಬ ಘೋಷವಾಕ್ಯವು ನಮ್ಮ ರಾಜ್ಯದ ಶ್ರೀಮಂತ ಕಲೆ,ಸಾಹಿತ್ಯ,ಸಂಸ್ಕೃತಿ ಮತ್ತು ತಾಯಿ ಭುವನೇಶ್ವರಿ ಅನುಗ್ರಹಿಸಿರುವ ಅತ್ಯದ್ಭುತ ಪ್ರವಾಸಿ ತಾಣಗಳನ್ನು ವರ್ಣಿಸಲು ಸೂಕ್ತವಾಗಿದೆ. **ಶ್ರೀ ಹೆಚ್ ಡಿ ಕುಮಾರಸ್ವಾಮಿ, ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ**ರವರ ನೇತೃತ್ವದಲ್ಲಿ ನಮ್ಮ ರಾಜ್ಯದ ಎಲ್ಲಾ ಪ್ರವಾಸಿ ತಾಣಗಳನ್ನು ಅಭಿವೃದ್ಧಿಗೊಳಿಸಲು ಕಂಕಣಬದ್ಧರಾಗಿದ್ದು,ಈ ನಿಟ್ಟಿನಲ್ಲಿ ತಮ್ಮಗಳ ಸಹಕಾರವನ್ನು ಅಪೇಕ್ಷಿಸಿದೆ. ಪ್ರವಾಸೋದ್ಯಮ ಇಲಾಖೆಯು ರಾಜ್ಯದಲ್ಲಿನ ಬಹುತೇಕ ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರ ಅನುಕೂಲಕ್ಕಾಗಿ ಮೂಲಭೂತ ಸೌಕರ್ಯಗಳಾದ ಯಾತ್ರಿ ನಿವಾಸ,ಡಾರ್ಮಿಟರಿ ಹಾಗೂ ಶೌಚಾಲಯಗಳನ್ನು ನಿರ್ಮಿಸುತ್ತಿದ್ದು, ಹಲವಾರು ತಾಣಗಳಲ್ಲಿ ಜಮೀನು/ನಿವೇಶನಗಳು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯ ಮಾಲೀಕತ್ವಕ್ಕೆ ಒಳಪಟ್ಟಿರುತ್ತದೆ.ಪ್ರವಾಸೋದ್ಯಮ ಇಲಾಖೆಯ ನಿಯಮಾವಳಿಗಳ ಪ್ರಕಾರ ಪ್ರವಾಸಿ ಮೂಲಭೂತ ಸೌಕರ್ಯಗಳು ನಿರ್ಮಾಣಗೊಳ್ಳುವ ಜಮೀನು/ನಿವೇಶನಗಳು ಹಕ್ಕಿನ ಸಮೇತ ಪ್ರವಾಸೋದ್ಯಮ ಇಲಾಖೆಯ ಹೆಸರಿಗೆ ವರ್ಗಾವಣೆಗೊಳ್ಳಬೇಕಿದ್ದು, ಈ ಪ್ರಕ್ರಿಯೆ ಪೂರ್ಣಗೊಳ್ಳದೇ ಕಾಮಗಾರಿಯನ್ನು ಆರಂಭಿಸಲು ಸಾಧ್ಯವಿರುವುದಿಲ್ಲ. ನಿವೇಶನ ದೊರಕದ ಕಾರಣ ಕಾಮಗಾರಿಗಳು ಆರಂಭವಾಗದೇ,ಪ್ರಗತಿ ಕುಂಠಿತವಾಗುತ್ತದೆ. ಇದರಿಂದಾಗಿ,ಪ್ರವಾಸಿ ಮೂಲಭೂತ ಸೌಕರ್ಯಗಳು ಸಕಾಲದಲ್ಲಿ ಪ್ರವಾಸಿಗರಿಗೆ ದೊರೆಯದೇ ಇರುವಂತಹ ಪರಿಸ್ಥಿತಿ ನಿರ್ಮಾಣವಾಗುವ ಸಾಧ್ಯತೆ ಇರುತ್ತದೆ. ಆದ್ದರಿಂದ, ತಾವುಗಳು ದಯಮಾಡಿ ಸಕಾಲದಲ್ಲಿ ಪ್ರವಾಸೋದ್ಯಮ ಇಲಾಖೆಗೆ ಜಮೀನು/ನಿವೇಶನಗಳನ್ನು ಹಸ್ತಾಂತರಿಸುವಂತೆ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆ ಹಾಗೂ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಅಗತ್ಯ ನಿರ್ದೇಶನ ನೀಡಲು ಕೋರಿದೆ.

ಗೌರವಾದರಗಳೊಂದಿಗೆ,

ತಮ್ಮ ವಿಶ್ವಾಸಿ,

[ಶ್ರೀ ಸಾ. ರಾ. ಮಹೇಶ್]

ಶ್ರೀ ಕೃಷ್ಣ ಭೈರೇಗೌಡ
ಸನ್ಮಾನ್ಯ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು
ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು
ಕರ್ನಾಟಕ ಸರ್ಕಾರ

ಕೃಷ್ಣ ಭೈರೇಗೌಡ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್,
ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು
ಹಾಗೂ ಸಂಸದೀಯ ವ್ಯವಹಾರಗಳ ಸಚಿವರು